# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ|| ವೈ.ಎ.ನಾರಾಯಣಸ್ವಾಮಿ ಅವರಿಂದ ನಿಯಮ 330ರಡಿಯಲ್ಲಿ ಮಂಡಿಸಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ

**ಸೂಚನಾ ಪತ್ರದ ವಿಷಯ**

ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ಹಾಗೂ ಶಿಕ್ಷಕರಿಗೆ ವೇತನವನ್ನು ಹೆಚ್ಚಿಸುವ ದೃಷ್ಠಿಯಿಂದ 7ನೇ ವೇತನ ಆಯೋಗವನ್ನು ರಚಿಸಿರುವುದು ಸರಿಯಷ್ಟೆ. ಇದರ ಸಂಬಂಧವಾಗಿ ಶೇ 17 ಮಧ್ಯಂತರ ಪರಿಹಾರವನ್ನು ನೀಡಿದೆ. ಈಗ 7ನೇ ವೇತನ ಆಯೋಗದ ವರದಿಯನ್ನು ಅತಿ ಶೀಘ್ರವಾಗಿ ತರಿಸಿಕೊಂಡು, ಆ ವರದಿಯನ್ನು ಅನುಷ್ಠಾನಗೊಳಿಸಿ, ಸರ್ಕಾರಿ ನೌಕರರಿಗೆ ಹಾಗೂ ಶಿಕ್ಷಕರಿಗೆ ವೇತನವನ್ನು ಹೆಚ್ಚಳ ಮಾಡುವ ನಿರ್ಧಾರವನ್ನು ತೆಗೆದುಕೊಂಡು, ನೌಕರರಗೆ ಅನುಕೂಲ ಕಲ್ಪಿಸುವ ವಿಚಾರದ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಸರ್ಕಾರದ ಉತ್ತರ**

ರಾಜ್ಯ ಸರ್ಕಾರದ ನೀತಿಯಂತೆ, ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಕುರಿತಂತೆ ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಿ ಸರ್ಕಾರಕ್ಕೆ ಸೂಕ್ತ ವರದಿ ಸಲ್ಲಿಸಲು, ದಿನಾಂಕ 19-11-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022ರಲ್ಲಿ ತ್ರಿಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ವೇತನ ಪರಿಷ್ಕರಣೆ ಕುರಿತಂತೆ ವೇತನ ಆಯೋಗವು ಸರ್ಕಾರದ ವಿವಿಧ ಇಲಾಖೆಗಳೊಂದಿಗೆ ಸಮಾಲೋಚಿಸುವ ಹಾಗೂ ಸೂಕ್ತ ಅಧ್ಯಯನ ನಡೆಸುವ ಅಗತ್ಯತೆಯನ್ನು ಮನಗಂಡ ರಾಜ್ಯ ಸರ್ಕಾರವು, ವೇತನ ಆಯೋಗದ ಕಾಲಮಿತಿಯನ್ನು ಅಂತಿಮವಾಗಿ ದಿನಾಂಕ: 15.03.2024ರವರೆವಿಗೆ ವಿಸ್ತರಿಸಲಾಗಿರುತ್ತದೆ.

ರಾಜ್ಯ ಸರ್ಕಾರಿ ನೌಕರರ ಹಿತದೃಷ್ಟಿಯಿಂದ 7ನೇ ರಾಜ್ಯ ವೇತನ ಆಯೋಗದ ವರದಿಯ ಬಗ್ಗೆ ಅಂತಿಮ ನಿರ್ಧಾರವನ್ನು ಬಾಕಿ ಇರಿಸಿ, 01-04-2023ರಿಂದ ಜಾರಿಗೆ ಬರುವಂತೆ ನೌಕರರ ಮೂಲ ವೇತನ /ಮೂಲ ಪಿಂಚಣಿಯ ಶೇ.17ರಷ್ಟು ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಿ ಆದೇಶ ಹೊರಡಿಸಲಾಗಿರುತ್ತದೆ. ಈ ಮಧ್ಯಂತರ ಪರಿಹಾರ ಸೌಲಭ್ಯವು ಸರ್ಕಾರಿ/ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರನ್ನೂ ಒಳಗೊಂಡಂತೆ ಸಮಸ್ತ ರಾಜ್ಯ ಸರ್ಕಾರಿ ನೌಕರರಿಗೆ ಲಭ್ಯವಿರುತ್ತದೆ. ಪ್ರಸ್ತುತ ರಾಜ್ಯ ಸರ್ಕಾರವು ವೇತನ ಆಯೋಗದ ಅಂತಿಮ ವರದಿಯ ನಿರೀಕ್ಷೆಯಲ್ಲಿರುತ್ತದೆ.

**ಸಂಖ್ಯೆ: ಆಇ 30 ಎಸ್ಆರ್ಪಿ 2023**

(ಸಿದ್ದರಾಮಯ್ಯ)
ಮುಖ್ಯಮಂತ್ರಿ